File No. AGRI-AMS/20/2019-AGRI_PLAN_B-AGRICULTURE Secretariat

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2019-20ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆಯಡಿ ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM) ಕಾರ್ಯಕ್ರಮಕ್ಕೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ಕೃಇ 41 ಕೃಯೋಕಾ 2019, ದಿನಾಂಕ: 02.04.2019.

2. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 3-1/2015-M&T(I&P), ದಿನಾಂಕ: 11.06.2019.

3. ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರ ಸಂಖ್ಯೆ: FD 20 BGL 2019 ದಿನಾಂಕ: 14.06.2019.

4. ಕೃಷಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಉಕೃನಿ(ಕೃಯಾಂ&ಸೂನೀ)/SMAM/ ಪ್ರಸ್ತಾವನೆ/ಅ.ಬಿ/2019-20, ದಿನಾಂಕ: 21.06.2019.

*****

ಪ್ರಸ್ತಾವನೆ:

2019-20ನೇ ಸಾಲಿನ ಆಯವ್ಯಯ ಸಂಪುಟ-3ರಲ್ಲಿ ಕೇಂದ್ರ ಪುರಸ್ಕೃತ ಯೋಜನೆ ರಾಷ್ಟ್ರೀಯ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆ ಲೆಕ್ಕ ಶೀರ್ಷಿಕೆ: 2401-00-800-1-53 ಅಡಿ ಒಟ್ಟು ರೂ. 8530.00 ಲಕ್ಷಗಳನ್ನು ನಿಗದಿಪಡಿಸಲಾಗಿದೆ.

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ, ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆಯನ್ನು 2019-20ನೇ ಸಾಲಿಗೆ ಮುಂದುವರೆಸುತ್ತಾ, ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM) ಕಾರ್ಯಕ್ರಮಕ್ಕೆ ಒಟ್ಟಾರೆ ರೂ. 6000.00 ಲಕ್ಷ ಅನುದಾನವನ್ನು ಒದಗಿಸಲಾಗಿರುತ್ತದೆ.

ಮೇಲೆ ಓದಲಾದ (2)ರ ಕೇಂದ್ರ ಸರ್ಕಾರದ ಪತ್ರದಲ್ಲಿ, ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆಯಡಿಯ ಉಪ ಯೋಜನೆ ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM) ಕಾರ್ಯಕ್ರಮಕ್ಕೆ 2019-20ನೇ ಸಾಲಿನಲ್ಲಿ ಒಟ್ಟಾರೆ ರೂ. 12500.41 ಲಕ್ಷಗಳ ವಾರ್ಷಿಕ ಕ್ರಿಯಾ ಯೋಜನೆಗೆ ಅನುಮೋದನೆ ನೀಡುತ್ತಾ, ಸದರಿ ಅನುದಾನದಲ್ಲಿ ರೂ. 3000.00 ಲಕ್ಷಗಳ ಅನುದಾನವನ್ನು ತೋಟಗಾರಿಕೆ ಇಲಾಖೆಗೆ ನಿಗದಿಪಡಿಸಲಾಗಿದೆ. ಮುಂದುವರೆದು, ಕೇಂದ್ರದ ಪಾಲಿನ ಅನುದಾನ ರೂ. 7500.00 ಲಕ್ಷಗಳನ್ನು ಬಿಡುಗಡೆ ಮಾಡಿರುತ್ತದೆ.

ಮೇಲೆ ಓದಲಾದ (3)ರ ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರದಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ರೂ. 7500.00 ಲಕ್ಷಗಳು ರಾಜ್ಯದ ಬೊಕ್ಕಸಕ್ಕೆ ಜಮೆಯಾದ ಕುರಿತು ದೃಢೀಕರಿಸಲಾಗಿದೆ.

ಮೇಲೆ ಓದಲಾದ (4)ರ ಕೃಷಿ ಆಯುಕ್ತರ ಪ್ರಸ್ತಾವನೆಯಲ್ಲಿ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆಯಡಿಯ ಉಪ ಯೋಜನೆ ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM) ಕಾರ್ಯಕ್ರಮಕ್ಕೆ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನ ರೂ. 7500.00 ಲಕ್ಷಗಳಿಗೆ ರಾಜ್ಯದ ಪಾಲಿನ ಶೇ. 40ರಷ್ಟು ಅನುದಾನ ರೂ. 5000.00 ಲಕ್ಷಗಳನ್ನು ಸೇರಿಸಿ ಒಟ್ಟಾರೆ ರೂ. 12500.00 ಲಕ್ಷಗಳ ಪೈಕಿ ತೋಟಗಾರಿಕೆ ಇಲಾಖೆಗೆ ನಿಗದಿಪಡಿಸಲಾದ ರೂ. 3000.00 ಲಕ್ಷಗಳನ್ನು ಹೊರತುಪಡಿಸಿ, ಸದರಿ ಕಾರ್ಯಕ್ರಮಕ್ಕೆ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-800-1-53 ಅಡಿ ಒದಗಿಸಿಕೊಳ್ಳಲಾಗಿರುವ ಅನುದಾನ ರೂ. 6000.00 ಲಕ್ಷಗಳನ್ನು ಬಿಡುಗಡೆ ಮಾಡಿ, ಉಳಿದ ಅನುದಾನವನ್ನು ಹೆಚ್ಚುವರಿಯಾಗಿ ಒದಗಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಪ್ರಸ್ತುತ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-800-1-53ರಡಿ ಲಭ್ಯವಿರುವ ಅನುದಾನದಿಂದ ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM) ಕಾರ್ಯಕ್ರಮಕ್ಕೆ ಅನುದಾನ ಬಿಡುಗಡೆ ಮಾಡಲು ಅನುವಾಗುವಂತೆ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 20 ಕೃಉಇ 2019, ಬೆಂಗಳೂರು, ದಿನಾಂಕ: 01.08.2019.**

ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆಯಡಿಯ ಉಪ ಯೋಜನೆ ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM) ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ, 2019-20ನೇ ಸಾಲಿನ ಮೊದಲನೇ ಕಂತಿನ ಅನುದಾನವಾಗಿ, ಕೇಂದ್ರ ಮತ್ತು ರಾಜ್ಯದ ಪಾಲಿನ ಅನುದಾನ ಸೇರಿಸಿ ಒಟ್ಟಾರೆ **ರೂ. 6000.00 ಲಕ್ಷಗಳನ್ನು (ಆರು ಸಾವಿರ ಲಕ್ಷ ರೂಪಾಯಿಗಳು ಮಾತ್ರ)** ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-800-1-53ರಡಿ ಈ ಕೆಳಕಂಡಂತೆ ಉಪ ಶೀರ್ಷಿಕೆವಾರು ಬಿಡುಗಡೆ ಮಾಡುತ್ತಾ ಕಾರ್ಯಕ್ರಮ ಅನುಷ್ಠಾನಗೊಳಿಸಲು ಮಂಜೂರಾತಿ ನೀಡಿದೆ.

(ರೂ. ಲಕ್ಷಗಳಲ್ಲಿ)

| **ಕ್ರ. ಸಂ.** | **ಘಟಕ** | **ಕೇಂದ್ರದ ಪಾಲು** | **ರಾಜ್ಯದ ಪಾಲು** | **ಒಟ್ಟು** |
|---|---|---|---|---|
| 1. | ಸಹಾಯಾನುದಾನ (106) | 2358.00 | 1572.00 | 3930.00 |
| 2. | ವಿಶೇಷ ಘಟಕ ಯೋಜನೆ (422) | 900.00 | 600.00 | 1500.00 |
| 3. | ಗಿರಿಜನ ಉಪ ಯೋನೆ(423) | 330.00 | 220.00 | 550.00 |
| 4. | ಸಾಮಾನ್ಯ (059) | 12.00 | 8.00 | 20.00 |
| | **ಒಟ್ಟು** | **3600.00** | **2400.00** | **6000.00** |

ಕೃಷಿ ನಿರ್ದೇಶಕರು ಕೇಂದ್ರ ಸರ್ಕಾರವು ಆಗ್ಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿ ಅನುಸಾರ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.

.3..

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್ ಡಿ/01/ಟಿಎಫ್ ಪಿ/2019, ದಿನಾಂಕ: 03.04.2019ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಕೃಇ 19 ಆಂಆಸ 2019, ದಿನಾಂಕ: 11.07.2019ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

B S Nagarathnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)

01/08/19

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ ಎಸ್ ಎ)/ (ಇ& ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01
2. ಪ್ರಧಾನ ಮಹಾಲೇಖಪಾಲರು ( ಎ & ಇ), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ.
7. ಕೃಷಿ ಆಯುಕ್ತರು/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
8. ಆಯುಕ್ತರು, ತೋಟಗಾರಿಕೆ ಇಲಾಖೆ, ಬೆಂಗಳೂರು.
9. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
10. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
11. ನಿರ್ದೇಶಕರು, TNMC, ಖನಿಜ ಭವನ, ಬೆಂಗಳೂರು.
12. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.
13. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ – 4&5), ಆರ್ಥಿಕ ಇಲಾಖೆ, ಬೆಂಗಳೂರು.
14. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
15. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.